ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1189
ಸದಸ್ಯರ ಹೆಸರು : ಶ್ರೀ. ಎಸ್.ಎಲ್.ಧರ್ಮೇಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 20.12.2018
ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ ಸಚಿವರು

| ಪ್ರಶ್ನೆ | ಉತ್ತರ |
|---|---|
| ಚಿಕ್ಕಮಗಳೂರು ಜಿಲ್ಲೆಗೆ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗಿದೆ; (ಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಇಡಿ 73 ಹೆಚ್‌ಪಿಟಿ 2012, ದಿನಾಂಕ: 16-11-2012 ರಲ್ಲಿ ಹೊಸದಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಮಂಜೂರು ಮಾಡಿ ಆದೇಶಿಸಿದೆ. |
| ಸದರಿ ಇಂಜಿನಿಯರಿಂಗ್ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾಗದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಸರ್ಕಾರ ಅನುದಾನವನ್ನು ಬಿಡುಗಡೆ ಮಾಡುವುದೇ; (ಮಾಹಿತಿ ನೀಡುವುದು) | 2018-19 ನೇ ಸಾಲಿಗೆ ಲೆಕ್ಕಶೀರ್ಷಿಕೆ: 4202-02-104-1-03-386 ರಡಿ ರೂ.43.10ಕೋಟಿಗಳ ಕ್ರಿಯಾ ಯೋಜನೆಯಲ್ಲಿ ಅನುದಾನ ಹಂಚಿಕೆ ಮಾಡಿಕೊಂಡಿದ್ದು, ಮುಂದುವರಿದ ಕಾಮಗಾರಿಗಳಿಗೇ ಅನುದಾನದ ಕೊರತೆ ಇದೆ. ಪ್ರಸಕ್ತ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಿಕ್ಕಮಗಳೂರು ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಕ್ರಿಯಾ ಯೋಜನೆಯಲ್ಲಿ ಅನುದಾನ ನಿಗದಿಯಾಗಿರುವುದಿಲ್ಲ.<br><br>ಈ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಕಟ್ಟಡ ಕಾಮಗಾರಿ ಪ್ರಾರಂಭವಾಗಿದೆಯೇ; ಇದುವರೆಗಿನ ಕಟ್ಟಡದ ಭೌತಿಕ ಮತ್ತು ಆರ್ಥಿಕ ಸ್ಥಿತಿಗತಿಗಳೇನು; (ಪೂರ್ಣ ಮಾಹಿತಿ ನೀಡುವುದು) | ಇಲ್ಲ<br>ಸರ್ಕಾರದ ಆದೇಶ ಸಂಖ್ಯೆ:ಇಡಿ 73 ಹೆಚ್‌ಪಿಟಿ 2012 ದಿನಾಂಕ:25-09-2014 ರನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಿಕ್ಕಮಗಳೂರು ಸಂಸ್ಥೆಗೆ ನಿವೇಶನ ಒದಗಿಸಿ ಮುಖ್ಯ ಕಟ್ಟಡ ಮತ್ತು ಇತರೇ ಮೂಲಭೂತ ಸೌಕರ್ಯಗಳನ್ನು ಹಾಗೂ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಒದಗಿಸಲು ವಿ.ಟಿ.ಯುಗೆ ಹಸ್ತಾಂತರಿಸಲಾಗಿತ್ತು ಹಾಗೂ ಸದರಿ ಸಂಸ್ಥೆಯ ಕಟ್ಟಡ ಕಾಮಗಾರಿಯ ಶಂಕುಸ್ಥಾಪನೆಯನ್ನೂ ನೆರವೇರಿಸಲಾಗಿದೆ.<br>ಆದರೆ, ವಿಶ್ವೇಶ್ವರಯ್ಯ ಟೆಕ್ನಾಲಜಿಕಲ್ ವಿಶ್ವವಿದ್ಯಾಲಯ (ವಿ.ಟಿ.ಯು) ಬೆಳಗಾವಿಯ ರೂ. 440.00 ಕೋಟಿಗಳನ್ನು ಆದಾಯ ತೆರಿಗೆ ಇಲಾಖೆಯು ತನ್ನ ವಶಕ್ಕೆ ಪಡೆದ ಕಾರಣ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ. ಆದಾಯ ತೆರಿಗೆ ಇಲಾಖೆ ತನ್ನ ವಶಕ್ಕೆ ಪಡೆದ ಹಣವನ್ನು ಹಿಂದಿರುಗಿಸಿದ ತಕ್ಷಣ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.. |

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 193 ಹೆಚ್‌ಪಿಯು 2018